## ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಪೂರ್ವ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ಪಡೆದು ನಿವೃತ್ತರಾದ ಬೋಧಕ ಸಿಬ್ಬಂದಿಗಳಿಗೆ ತುಟ್ಟಿಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**-(1) ಸರ್ಕಾರಿ ಆದೇಶ ಸಂಖ್ಯೆ: ಅಇ (ವಿ) 21 ಸಿಪಿಪಿ 2010 ದಿನಾಂಕ: 9.12.2010.

(2) ಸರ್ಕಾರಿ ಆದೇಶ ಸಂಖ್ಯೆ: ಅಇ (ವಿ) 126 ಪಿಇಎನ್ 2011 (11) ದಿನಾಂಕ: 19.05.2011.

(3) ಸರ್ಕಾರಿ ಆದೇಶ ಸಂಖ್ಯೆ: ಅಇ 38 ಎಸ್‌ಆರ್‌ಪಿ 2011 ದಿನಾಂಕ: 20.10.2011.

### ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 248 ಪಿಇಎನ್ 2011
### ಬೆಂಗಳೂರು, ದಿನಾಂಕ: 31ನೇ ಅಕ್ಟೋಬರ್ 2011 .

ದಿನಾಂಕ 1ನೇ ಜುಲೈ 2011 ರಿಂದ ಜಾರಿಗೆ ಬರುವಂತೆ ಪೂರ್ವ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದು ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗ ಮೃತರಾದ ಬೋಧಕ ವರ್ಗದ ಪಿಂಚಣಿದಾರರ/ಕುಟುಂಬ ಪಿಂಚಣಿದಾರರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 166 ರಿಂದ 177ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

ಈ ಆದೇಶದಿಂದಾಗಿ ಪಾವತಿಸಬೇಕಾದ ತುಟ್ಟಿಭತ್ಯೆಯ ಮೊತ್ತವನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿಸತಕ್ಕದ್ದು.

ತುಟ್ಟಿಭತ್ಯೆ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪದ್ಮಾವತಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ)

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2) ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.

..2/-

3) ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5) ಸರ್ಕಾರದ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ/ಕೃಷಿ ಮತ್ತು ತೋಟಗಾರಿಕೆ ಇಲಾಖೆ.
6) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7) ಎಲ್ಲಾ ಜಿಲ್ಲಾ ಖಜಾನೆ ಅಧಿಕಾರಿಗಳು.
8) ಎಲ್ಲಾ ಶಾಖೆಗಳು, ಶಿಕ್ಷಣ ಇಲಾಖೆ/ಕೃಷಿ ಮತ್ತು ತೋಟಗಾರಿಕೆ ಇಲಾಖೆ.
9) ಶಾಖೆಯ ರಕ್ಷಾ ಕಡತ.
10)ವಾರಪತ್ರ.